ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY, RESEARCH AND REFERENCE BRANCH**

ಪತ್ರಿಕಾ ತುಣುಕುಗಳು

**PAPER CLIPPINGS**

13

ಇಲಾಖೆ / ವಿಷಯ : DEPARTMENT / SUBJECT: ಸಂಸತ್ತು - ಅಧಿವೇಶನ

ಪತ್ರಿಕೆಯ ಹೆಸರು : NAME OF THE NEWS PAPER: ಪ್ರಜಾವಾಣಿ

ದಿನಾಂಕ : DATE : 3-9-2020

# ಪ್ರಶ್ನೋತ್ತರ ಅವಧಿ ರದ್ದು: ಪ್ರತಿಪಕ್ಷಗಳ ಆಕ್ರೋಶ

ಪ್ರ. ವಾ. 3-9-2020

ನವದೆಹಲಿ: ಸಂಸತ್ತಿನ ಮುಂಗಾರು ಅಧಿವೇಶನ ಸೆ. 14ರಿಂದ ಆರಂಭವಾಗಲಿದ್ದು, ಈ ಬಾರಿ ಪ್ರಶ್ನೋತ್ತರ ಅವಧಿ ಇರುವುದಿಲ್ಲ. ಅಲ್ಲದೇ, ಸಾರ್ವಜನಿಕ ಪ್ರಾಮುಖ್ಯತೆಯ ವಿಷಯಗಳ ಬಗ್ಗೆ ಚರ್ಚಿಸಲು ಸಂಸತ್ ಸದಸ್ಯರಿಗೆ ಕಡಿಮೆ ಅವಧಿ ನಿಗದಿಪಡಿಸಲಾಗಿದೆ.

ಅಧಿವೇಶನದಲ್ಲಿ ಯಾವುದೇ ಖಾಸಗಿ ಮಸೂದೆಗಳ ಮಂಡನೆ ಇರುವುದಿಲ್ಲ, ಶೂನ್ಯ ಅವಧಿಯನ್ನೂ ಮೊಟಕುಗೊಳಿಸಲಾಗಿದೆ.

**'ಪ್ರಜಾಪ್ರಭುತ್ವದ ಕಗ್ಗೊಲೆ', ದೂಷಣೆ:** ಪ್ರಶ್ನೋತ್ತರ ಅವಧಿಯನ್ನು ರದ್ದು ಪಡಿಸಿರುವುದು ಹಾಗೂ ಶೂನ್ಯ ಅವಧಿಯನ್ನು ಮೊಟಕುಗೊಳಿಸಿರುವ ಬಗ್ಗೆ ಖಂಡಿಸಿರುವ ವಿರೋಧ ಪಕ್ಷಗಳು ಸರ್ಕಾರವು 'ಪ್ರಜಾಪ್ರಭುತ್ವದ ಕಗ್ಗೊಲೆ' ನಡೆಸಿದೆ ಎಂದು ದೂಷಿಸಿವೆ.